All India Radio: Bangalore
Regional Bulletin In Kannada
19.12.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಹಾಲಿನ ಪ್ರೋತ್ಸಾಹ ಧನ ೭ ರೂಪಾಯಿಗೆ ಹೆಚ್ಚಿಸಲಾಗುವುದು; ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ
- ಹುಣಸೆ, ಹಲಸು ಮತ್ತು ನೇರಳೆಗಾಗಿ ರಾಷ್ಟ್ರೀಯ ಮಂಡಳಿ ರಚಿಸಲು ಕೇಂದ್ರಕ್ಕೆ ಮಾಜಿ ಪ್ರಧಾನಿ ದೇವೇಗೌಡ ಮನವಿ
- ಜಲಜೀವನ್ ಮಿಷನ್ ಯಶಸ್ವಿ ಹಿನ್ನೆಲೆ; ಉಡುಪಿಯ ಕೋಡಿಗ್ರಾಮ ಪಂಚಾಯಿತಿ ಫಲಾನುಭವಿಗಳೊಂದಿಗೆ ಕೇಂದ್ರ ಸಚಿವರ ಸಂವಾದ
- ಆರೋಗ್ಯಸೇತು ಸಂಚಾರಿ ಆರೋಗ್ಯ ಘಟಕಗಳಿಗೆ ಬೆಳಗಾವಿಯಲ್ಲಿ ಸರ್ಕಾರ ಚಾಲನೆ
- ಆಲಮಟ್ಟಿ ಅಣೆಕಟ್ಟಿನ ಎತ್ತರ ಹೆಚ್ಚಿಸುವ ರಾಜ್ಯದ ಪ್ರಸ್ತಾವನೆಗೆ ಆಂಧ್ರಪ್ರದೇಶ ವಿರೋಧ; ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸುವಂತೆ ಆಗ್ರಹ

<><><><>

ಪ್ರಣಾಳಿಕೆಯಲ್ಲಿ ಭರವಸೆ ನೀಡಿದಂತೆ ಹಾಲಿನ ಪ್ರೋತ್ಸಾಹ ಧನ ೭ ರೂಪಾಯಿಗೆ ಹೆಚ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಉತ್ತರ ಕರ್ನಾಟಕದ ಅಭಿವೃದ್ಧಿ ಕುರಿತಂತೆ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪ್ರತಿ ದಿನ ಒಂದು ಕೋಟಿ ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದು, ೫ ಕೋಟಿ ರೂಪಾಯಿ ಪ್ರೋತ್ಸಾಹ ಧನ ನೀಡಲಾಗುತ್ತಿದೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಕಬ್ಬಿನ ಎಫ್ಆರ್‌ಪಿ, ಸಕ್ಕರೆಯ ಎಂಎಸ್‌ಪಿ ಹೆಚ್ಚು ಮಾಡಬೇಕು ಹಾಗೂ ಎಥೆನಾಲ್ ಹಂಚಿಕೆ ಮತ್ತು ಸಕ್ಕರೆಯ ರಫ್ತು ಪ್ರಮಾಣವನ್ನು ಹೆಚ್ಚಳ ಮಾಡಬೇಕು ಎಂದು ಕೇಂದ್ರ ಸರ್ಕಾರವನ್ನು ಮುಖ್ಯಮಂತ್ರಿ ಒತ್ತಾಯಿಸಿದ್ದಾರೆ. ಈ ವೇಳೆ ಮಧ್ಯಪ್ರವೇಶಿಸಿದ ವಿರೋಧ ಪಕ್ಷದ ನಾಯಕ ಆರ್. ಅಶೋಕ, ಪ್ರತಿಯೊಂದು ವಿಚಾರಕ್ಕೂ ಕೇಂದ್ರ ಸರ್ಕಾರದ ಕಡೆ ಬೊಟ್ಟು ಮಾಡಿದರೆ ಹೇಗೆ ಎಂದು ಪ್ರಶ್ನಿಸಿದ್ದಾರೆ. ಉತ್ತರ ಕರ್ನಾಟಕ ಅಭಿವೃದ್ಧಿ

ಕುರಿತು ನಡೆದ ಚರ್ಚೆಗೆ ಮುಖ್ಯಮಂತ್ರಿ ನೀಡಿದ ಉತ್ತರಕ್ಕೆ ತೃಪ್ತರಾಗದ ಪ್ರತಿಪಕ್ಷಗಳ ಸದಸ್ಯರು ಸಭಾತ್ಯಾಗ ನಡೆಸಿದರು.

<><><><>

ಮಾಜಿ ಪ್ರಧಾನಿ ಹಾಗೂ ರಾಜ್ಯಸಭಾ ಸದಸ್ಯ ಎಚ್.ಡಿ. ದೇವೇಗೌಡ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ನವದೆಹಲಿಯಲ್ಲಿಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಅವರನ್ನು ಭೇಟಿ ಮಾಡಿದ್ದಾರೆ. ಹುಣಸೆ, ಹಲಸು ಮತ್ತು ನೇರಳೆ ಮೊದಲಾದ ಪೌಷ್ಠಿಕಾಂಶಯುಕ್ತ ಹಣ್ಣಿನ ಬೆಳೆಗಳಿಗಾಗಿ ಪ್ರತ್ಯೇಕವಾದ ರಾಷ್ಟ್ರೀಯ ಮಂಡಳಿ ಸ್ಥಾಪಿಸುವಂತೆ ಪ್ರಸ್ತಾಪಿಸಿದ್ದಾರೆ. ಸಂಸತ್ ಭವನದ ಕಚೇರಿಯಲ್ಲಿ ಭೇಟಿಯಾದ ಉಭಯ ನಾಯಕರು ತಮ್ಮ ಪ್ರಸ್ತಾವನೆ ಕುರಿತ ಪತ್ರವನ್ನು ನೀಡಿದ್ದಾರೆ. ಹುಣಸೆ, ಹಲಸು, ನೇರಳೆ ಪೌಷ್ಠಿಕಾಂಶಯುಕ್ತ ಹಣ್ಣಿನ ಬೆಳೆಗಳಾಗಿದ್ದು, ಇದರ ಉಪ ಉತ್ಪನ್ನಗಳನ್ನು ಔಷಧೀಯ ಕೈಗಾರಿಕೆಗಳಿಂದ ಬೇಡಿಕೆ ಸೇರಿದಂತೆ ದೇಶೀಯ ಮತ್ತು ರಫ್ತು ಮಾರುಕಟ್ಟೆಗಳಲ್ಲಿ ಹೆಚ್ಚಿನ ಬೇಡಿಕೆ ಹೊಂದಿದೆ. ಈ ಬೆಳೆಗಳು ಹೆಚ್ಚಿನ ಆದಾಯ ಗಳಿಸುವ ಬೆಳೆಗಳೆಂದು ಕೃಷಿ ಸಚಿವರ ಗಮನ ಸೆಳೆದಿದ್ದಾರೆ.

<><><><>

ಗ್ರಾಮೀಣ ಭಾಗದ ಜನರಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸುವ ಉದ್ದೇಶದಿಂದ ಜಾರಿಗೆ ಬಂದಿರುವ ಕೇಂದ್ರದ ಮಹತ್ವಾಕಾಂಕ್ಷಿ ಯೋಜನೆ ಜಲಜೀವನ್ ಮಿಷನ್ ಉಡುಪಿ ಜಿಲ್ಲೆಯ ಬ್ರಹ್ಮಾವರ ತಾಲೂಕಿನ ಕೋಡಿ ಗ್ರಾಮ ಪಂಚಾಯತ್ ನಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಂಡಿದೆ. ದಿನದ ೨೪ ಗಂಟೆ ನೀರುವ ಸರಬರಾಜು ಮಾಡುವ ಪೈಲೆಟ್ ಪ್ರಾಜೆಕ್ಟ್ ಇದಾಗಿದೆ. ಈ ಮೂಲಕ ಕೋಡಿ ಗ್ರಾಮವು ಶುದ್ಧ ಕುಡಿಯುವ ನೀರನ್ನು ಪ್ರತೀ ಮನೆಯ ಬಾಗಿಲಿಗೆ ಪೂರೈಸಿ ಮಾದರಿ ಗ್ರಾಮವಾಗಿ ರೂಪುಗೊಂಡಿದೆ. ಸುಜಲ ಗ್ರಾಮ ಸಂವಾದದ ೨ನೇ ಅವೃತ್ತಿಯ ಭಾಗವಾಗಿ ಕೇಂದ್ರ ಸಚಿವರಾದ ಸಿ.ಆರ್ ಪಾಟೀಲ್ ಹಾಗೂ ವಿ. ಸೋಮಣ್ಣ ಅವರು ಕೋಡಿ ಗ್ರಾಮದ ಪ್ರತಿನಿಧಿಗಳೊಂದಿಗೆ ಸುಜಲ ಗ್ರಾಮ ಸಂವಾದ ನಡೆಸಿದರು. ಗ್ರಾಮ ಪಂಚಾಯತ್ ಜಲ್ ಜೀವನ್ ಮಿಷನ್ ಯೋಜನೆಯು ತಮ್ಮ ದೈನಂದಿನ ಜೀವನವನ್ನು ಹೇಗೆ ಸುಧಾರಿಸಿದೆ ಎಂಬುದನ್ನು ಈ ಸಂವಾದದಲ್ಲಿ ಹಂಚಿಕೊಂಡರು. ಬಳಿಕ ಆಕಾಶವಾಣಿ ಜೊತೆ ಮಾತನಾಡಿದ ಫಲಾನುಭವಿಗಳು, ಜಲಜೀವನ್ ಮಿಷನ್ ಬಗ್ಗೆ ಸಂತಸ ವ್ಯಕ್ತಪಡಿಸಿದ್ದಾರೆ.

****ಧ್ವನಿ****(೧)

****ಧ್ವನಿ****(೨)

<><><><>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇಂದಿನಿಂದ ಇದೇ ೨೨ರ ವರೆಗೆ ರಾಜ್ಯ ಪ್ರವಾಸ ಕೈಗೊಳ್ಳಲಿದ್ದಾರೆ. ಇಂದು ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಲಿರುವ ಅವರು, ವಿಜಯನಗರದ ಹಂಪಿಯಲ್ಲಿ ವಾಸ್ತವ್ಯ ಹೂಡಲಿದ್ದಾರೆ. ನಾಳೆ ಅವರು, ಹಂಪಿಯಲ್ಲಿ ವಿಜಯಪಥ ಯೋಜನೆಗೆ ಚಾಲನೆ ನೀಡಲಿದ್ದಾರೆ. ಇದೇ ೨೧ರಂದು ಕಮಲಾಪುರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ.

<><><><>

ಆರೋಗ್ಯ ಸೇವೆಯಿಂದ ವಂಚಿತರಾಗಿರುವ ಜನರಿಗೆ ಆರೋಗ್ಯ ಸೇತು-ಸಂಚಾರಿ ಆರೋಗ್ಯ ಘಟಕ ಯೋಜನೆ ನೆರವಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಳಗಾವಿ ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಲಾಗಿದ್ದ 'ಆರೋಗ್ಯ ಸೇತು ಸಂಚಾರಿ ಆರೋಗ್ಯ ಘಟಕ'ಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಸಂಪರ್ಕ ರಹಿತ, ದುರ್ಗಮ ಮತ್ತು ಗುಡ್ಡಗಾಡು ಪ್ರದೇಶಗಳ ಜನರ ಮನೆಯ ಬಾಗಿಲಲ್ಲೆ ಆರೋಗ್ಯ ಸೇವೆ ನೀಡುವ ಉದ್ದೇಶ ಈ ಯೋಜನೆ ಹೊಂದಿದೆ ಎಂದು ತಿಳಿಸಿದ್ದಾರೆ. ಆರೋಗ್ಯ ಸೇವೆಗಳಿಂದ ವಂಚಿತರಾಗಿರುವ ಜನರಿಗೆ ಈ ಯೋಜನೆಯಿಂದ ಲಾಭವಾಗಲಿದೆ ಎಂದು ಹೇಳಿದ್ದಾರೆ.

ಧ್ವನಿ : ಮುಖ್ಯಮಂತ್ರಿ

<><><><>

ಕೃಷ್ಣಾ ನದಿಗೆ ನಿರ್ಮಿಸಲಾಗಿರುವ ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು ಹೆಚ್ಚಿಸುವ ರಾಜ್ಯದ ಪ್ರಸ್ತಾವನೆಗೆ ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ವಿರೋಧ ವ್ಯಕ್ತಪಡಿಸಿದ್ದಾರೆ. ನವದೆಹಲಿಯಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರೊಂದಿಗೆ ನಡೆದ ಸಭೆಯಲ್ಲಿ ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕೆಂದು ಅವರು ಒತ್ತಾಯಿಸಿದ್ದಾರೆ. ಅಣೆಕಟ್ಟಿನ ಎತ್ತರವನ್ನು ಹೆಚ್ಚಿಸುವುದರಿಂದ ಆಂಧ್ರಪ್ರದೇಶದ ಮೇಲೆ ಪ್ರತಿಕೂಲ ಪರಿಣಾಮ

ಬೀರಬಹುದು ಎಂದು ತಿಳಿಸಿದ್ದಾರೆ. ಕರ್ನಾಟಕ ಈಗಾಗಲೇ ಭೂಸ್ವಾಧೀನ ಪ್ರಾರಂಭಿಸಿದ್ದು, ಇದಕ್ಕೆ ತಡೆ ನೀಡುವಂತೆ ಕೇಂದ್ರಕ್ಕೆ ಮನವಿ ಮಾಡಿದ್ದಾರೆ.

<><><>

ಬೆಳಗಾವಿಯ ವಜ್ರಪೋಹ ಜಲಪಾತದ ಬಳಿ ವನ್ಯಜೀವಿಗಳಿಗೆ ತೊಂದರೆ ನೀಡುತ್ತಿರುವ ಬಗ್ಗೆ ದೂರುಗಳು ಬಂದಿದ್ದು, ಪ್ರವೇಶ ನಿರ್ಬಂಧಿಸುವಂತೆ ಅರಣ್ಯ, ಜೀವಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸೂಚಿಸಿದ್ದಾರೆ ಬೆಳಗಾವಿಯಲ್ಲಿಂದು ಬೆಳಗಾವಿ ವೃತ್ತದ ಅರಣ್ಯಾಧಿಕಾರಿಗಳ ಸಭೆ ನಡೆಸಿದ ಅವರು, ಗೋಕಾಕ ಘಟಪ್ರಭ ಪಕ್ಷಿಧಾಮದಲ್ಲಿ ಪ್ರವಾಸಿಗರಿಗೆ ಹೆಚ್ಚಿನ ಮೂಲಭೂತ ಸೌಕರ್ಯ ಕಲ್ಪಿಸಿ, ಹೆಚ್ಚುವರಿ ದೋಣಿಗಳನ್ನು ನಿಯೋಜಿಸಿ ಪರಿಸರ ಪ್ರವಾಸೋದ್ಯಮಕ್ಕೆ ಒತ್ತು ನೀಡುವಂತೆ ತಿಳಿಸಿದ್ದಾರೆ. ಪಟ್ಟಾಭೂಮಿ ಸೇರಿ ಜೀವನೋಪಾಯಕ್ಕೆ ೩ ಎಕರೆಗಿಂತ ಕಡಿಮೆ ಅರಣ್ಯ ಒತ್ತುವರಿ ಮಾಡಿರುವ ಬಡವರಿಗೆ ತೊಂದರೆ ನೀಡದೆ, ೩ ಎಕರೆಗಿಂತ ಹೆಚ್ಚಿನ ಹಾಗೂ ೨೦೧೫ರ ನಂತರದ ಎಲ್ಲಾ ಹೊಸ ಒತ್ತುವರಿಯನ್ನು ತೆರವುಗೊಳಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಒತ್ತುವರಿ ತೆರವು ಮಾಡಿದ ಪ್ರದೇಶದಲ್ಲಿ ಸ್ಥಳೀಯ ಪ್ರಭೇದದ ಸಸ್ಯಗಳನ್ನು ನೆಟ್ಟು ಹಸಿರು ವಲಯ ಹೆಚ್ಚಿಸುವಂತೆ ಸಚಿವರು ಆದೇಶಿಸಿದ್ದಾರೆ.

<><><>

ನೌಕಾಪಡೆಯಲ್ಲಿ ಕೌಶಲ್ಯಭರಿತ ಯುವಕರ ಕೊರತೆ ಇದ್ದು, ವಿಶ್ವವಿದ್ಯಾಲಯಗಳು ಇದನ್ನು ನೀಗಿಸುವಂತೆ ಭಾರತೀಯ ನೌಕಾಪಡೆ ಪರಿಶೀಲನಾ ವಿಭಾಗದ ಪ್ರಧಾನ ನಿರ್ದೇಶಕ ರೂಪಕ್ ಬರುವಾ ಮನವಿ ಮಾಡಿದ್ದಾರೆ. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಬೆಂಗಳೂರು ಪ್ರಾದೇಶಿಕ ಕಚೇರಿಗೆ ಭೇಟಿ ನೀಡಿ ಮಾತನಾಡಿದ ಅವರು, ವೈಮಾನಿಕ ಕ್ಷೇತ್ರದಲ್ಲಿ ವಿಟಿಯು ಹೊಸ ಕೋರ್ಸ್‌ಗಳನ್ನು ತರುತ್ತಿರುವುದು ಸಂಸತದ ವಿಚಾರ. ನೌಕಾಪಡೆಯಲ್ಲಿ ಕೌಶಲ ಭರಿತ ಯುವಕರ ಅವಶ್ಯಕತೆ ಇದ್ದು, ಕಾಲೇಜು ಹಂತದಲ್ಲೇ ವಿದ್ಯಾರ್ಥಿಗಳಿಗೆ ಉತ್ತಮ ತರಬೇತಿ ನೀಡಿದಲ್ಲಿ ಬಹಳ ಅನುಕೂಲವಾಗಲಿದೆ ಎಂದು ಹೇಳಿದ್ದಾರೆ. ರಕ್ಷಣಾ ತಂತ್ರಜ್ಞಾನದಲ್ಲಿ ಎಂ.ಟೆಕ್.ಕೋರ್ಸ್ ರೂಪಿಸುತ್ತಿರುವುದು ರಕ್ಷಣಾ ವಲಯಕ್ಕೆ ಹೆಚ್ಚಿನ ಬಲ ನೀಡಲಿದೆ ಎಂದು ತಿಳಿಸಿದ್ದಾರೆ.

<><><>

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಮೇಲೆ ಯಾವುದೇ ದೌರ್ಜನ್ಯ ಕಂಡುಬಂದರೆ ಎಫ್‌ಐಆರ್ ದಾಖಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮೈಸೂರು ಜಿಲ್ಲಾಧಿಕಾರಿ ಜಿ

ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದ್ದಾರೆ. ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಸ್ ಸಿ ಪಿ, ಟಿ ಎಸ್ ಪಿ ಅನುದಾನದಲ್ಲಿ ಮಹಾನಗರ ಪಾಲಿಕೆ ವತಿಯಿಂದ ೭೭ ಸಮುದಾಯ ಭವನಗಳನ್ನು ನಿರ್ಮಿಸಲು ಸಮಿತಿ ರಚಿಸಲಾಗುತ್ತಿದೆ ಎಂದು ಹೇಳಿದ್ದಾರೆ.

<><><><>

ದೇಶದಲ್ಲಿ ವಾರ್ಷಿಕ ಸರಾಸರಿ ೧೭ ಸಾವಿರ ಮಕ್ಕಳು ರಸ್ತೆ ಅಪಘಾತಗಳಿಗೆ ಬಲಿಯಾಗುತ್ತಿದ್ದು, ಕರ್ನಾಟಕ ೭ ನೇ ಸ್ಥಾನದಲ್ಲಿದೆ ಎಂದು ಯುನಿಸೆಫ್ ವೈದ್ಯಕೀಯ ಸಲಹೆಗಾರ ಡಾ.ಶ್ರೀಧರ ಮ್ಯಾವಂಕಿ ತಿಳಿಸಿದ್ದಾರೆ ದಾವಣಗೆರೆ ವಿಶ್ವವಿದ್ಯಾನಿಲಯ ಮತ್ತು ಮೈಸೂರು ವಿಶ್ವವಿದ್ಯಾಲಯದ ಸಹಭಾಗಿತ್ವದಲ್ಲಿ ಯುನಿಸೆಫ್ ಸಹಯೋಗದೊಂದಿಗೆ ಏರ್ಪಡಿಸಿದ್ದ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಸಂಚಾರಿ ನಿಯಮಗಳ ಬಗ್ಗೆ ಮಕ್ಕಳಲ್ಲಿ ಮತ್ತು ದೊಡ್ಡವರಲ್ಲಿಯೂ ಸೂಕ್ತ ಅರಿವಿನ ಕೊರತೆಯಾಗಿರುವುದೇ ಅಪಘಾತ ಹೆಚ್ಚಳವಾಗಿರುವುದಕ್ಕೆ ಕಾರಣ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ವತಿಯಿಂದ ಯಾದಗಿರಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಇದೇ ೨೮ ರಿಂದ ೩೦ರವರೆಗೆ ರಾಜ್ಯ ಮಟ್ಟದ ೫ನೇ ವೈಜ್ಞಾನಿಕ ಸಮ್ಮೇಳನ ಆಯೋಜಿಸಲಾಗುವುದು ಎಂದು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷ ಹುಲಿಕಲ್ ನಟರಾಜ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>